ಉಪಾಧ್ಯಕ್ಷಣಿಯವರು : ವಿಧೇಯಕವನ್ನು ಮಂಡಿಸಲಾಯಿತು.

1991ರ ಕರ್ನಾಟಕ ಸಹಕಾರಿ ಸಂಘಗಳ (ತಿದ್ದುಪಡಿ) ವಿಧೇಯಕ (ಮಂಡನೆಗೆ ಅನುಮತಿ ಕೋರಿಕೆ)

ಶ್ರೀ ಎಸ್.ಆರ್. ಮೋರೆ (ಸಹಕಾರಿ ರಾಜ್ಯ ಸಚಿವರು) : ಮಾನ್ಯ ಉಪಾಧ್ಯಕ್ಷಣಿಯವರೇ, 1991ರ ಕರ್ನಾಟಕ ಸಹಕಾರಿ ಸಂಘಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಉಪಾಧ್ಯಕ್ಷಣಿಯವರು : ಪ್ರಸ್ತಾವ ಏನೆಂದರೆ "1991ರ ಕರ್ನಾಟಕ ಸಹಕಾರಿ ಸಂಘಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿಯನ್ನು ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಸ್.ಆರ್. ಮೋರೆ (ಸಹಕಾರಿ ರಾಜ್ಯ ಸಚಿವರು) : ಮಾನ್ಯ ಉಪಾಧ್ಯಕ್ಷಣಿಯರೇ, 1991ರ ಕರ್ನಾಟಕ ಸಹಕಾರಿ ಸಂಘಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾಧ್ಯಕ್ಷಣಿಯವರು : ವಿದೇಯಕವನ್ನು ಮಂಡಿಸಲಾಗಿದೆ.

1991ರ ಕರ್ನಾಟಕ ಆಯುರ್ವೇದ ಮತ್ತು ಯುನಾನಿ ವೈದ್ಯ ವೃತ್ತಿ ನಿರತ ನೋಂದಣಿ ಮತ್ತು ವೈದ್ಯಕೀಯ ವೃತ್ತಿ ನಿರತರ ಸಂಕೀರ್ಣ ಉಪಬಂಧಗಳ (ತಿದ್ದುಪಡಿ) ವಿಧೇಯಕ.

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಜಿ. ಪುಟ್ಟಸ್ವಾಮಿ ಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) : ಮಾನ್ಯ ಉಪಾಧ್ಯಕ್ಷಣಿಯವರೇ, 1991ರ ಕರ್ನಾಟಕ ಆಯುರ್ವೇದ ಮತ್ತು ಯುನಾನಿ ವೈದ್ಯ ವೃತ್ತಿ ನಿರತರ ನೋಂದಣಿ ಮತ್ತು ವೈದ್ಯಕೀಯ ವೃತ್ತಿ ನಿರತರ ಸಂಕೀರ್ಣ ಉಪಬಂಧಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಉಪಾಧ್ಯಕ್ಷಣಿಯವರು : ಪ್ರಸ್ತಾವ ಏನೆಂದರೆ "1991ರ ಕರ್ನಾಟಕ ಆಯುರ್ವೇದ ಮತ್ತು ಯುನಾನಿ ವೈದ್ಯ ವೃತ್ತಿ ನಿರತರ ನೋಂದಣಿ ಮತ್ತು ವೈದ್ಯಕೀಯ ವೃತ್ತಿ ನಿರತರ ಸಂಕೀರ್ಣ ಉಪಬಂಧಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಜಿ. ಪುಟ್ಟಸ್ವಾಮಿಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) : ಮಾನ್ಯ ಉಪಾಧ್ಯಕ್ಷಣಿಯವರೇ, 1991ರ ಕರ್ನಾಟಕ ಆಯುರ್ವೇದ ಮತ್ತು ಯುನಾನಿನ ವೈದ್ಯ ವೃತ್ತಿ ನಿರತರ ನೋಂದಣಿ ಮತ್ತು ವೈದ್ಯಕೀಯ ವೃತ್ತಿ ನಿರತರ ಸಂಕೀರ್ಣ ಉಪಬಂಧಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾಧ್ಯಕ್ಷಣಿಯವರು : ವಿದೇಯಕವನ್ನು ಮಂಡಿಸಲಾಗಿದೆ.